**Akashvani : Bangalore**
**National Bulletin In Kannada**
**03.06.2024 / 13.10 hrs**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**03.06.2024 / 13.10 hrs**

**<><*<><>*><>**

**ಮುಖ್ಯಾಂಶಗಳು**

೧. ೨೦೨೪ರ ಸಾರ್ವತ್ರಿಕ ಲೋಕಸಭಾ ಚುನಾವಣೆ ; ನಾಳಿನ ಮತಎಣಿಕೆಗೆ ಆಯೋಗದಿಂದ ಸಕಲ ಸಿದ್ಧತೆ

೨. ಟೋಲ್ ಪ್ಲಾಜಾಗಳಲ್ಲಿ ವಾಹನ ಶುಲ್ಕ ಶೇಕಡ ೫ರಷ್ಟು ಹೆಚ್ಚಳ ; ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಘೋಷಣೆ

೩. ಮೇ ತಿಂಗಳಲ್ಲಿ ಯುಪಿಐ ಮೂಲಕ ದಾಖಲೆಯ ೧೪.೦೪ ಬಿಲಿಯನ್ ವಹಿವಾಟು

೪. ಚುನಾವಣೋತ್ತರ ಸಮೀಕ್ಷೆಗಳ ಹಿನ್ನೆಲೆ ; ಷೇರು ಸಂವೇದಿ ಸೂಚ್ಯಂಕ ದಾಖಲೆಯ ಏರಿಕೆ

೫. ಐಸಿಸಿ ಟಿ-೨೦ ವಿಶ್ವಕಪ್ ಕ್ರಿಕೆಟ್ ; ಸೂಪರ್ ಓವರ್‌ನಲ್ಲಿ ಒಮನ್ ವಿರುದ್ಧ ನಮೀಬಿಯಾಗೆ ೧೧ ರನ್ ರೋಚಕ ಜಯ

**<><*<><>*><>**

೨೦೨೪ರ ಲೋಕಸಭಾ ಚುನಾವಣೆಯ ಏಳು ಹಂತದ ಮತದಾನ ಪೂರ್ಣಗೊಂಡಿದ್ದು, ಎಲ್ಲರ ಚಿತ್ತ ಈಗ ಮತ ಎಣಿಕೆ ದಿನದ ಮೇಲೆ ನೆಟ್ಟಿದೆ. ಈಗಾಗಲೇ ಇಡೀ ದೇಶಾದ್ಯಂತ ಮತ ಎಣಿಕೆಗೆ ಚುನಾವಣೆ ಆಯೋಗ ಎಲ್ಲ ರೀತಿಯ ಕ್ರಮಗಳನ್ನು ಕೈಗೊಂಡಿದೆ. ಮತ ಎಣಿಕೆಯ ಕೇಂದ್ರಗಳ ಸುತ್ತಮುತ್ತ ಬಿಗಿ ಬಂದೋಬಸ್ತ್ ಕೂಡ ಕೈಗೊಳ್ಳಲು ಪೊಲೀಸರನ್ನು ನಿಯೋಜಿಸಲಾಗಿದೆ. ನಾಳೆ ಬೆಳಗ್ಗೆ ೮ ಗಂಟೆಗೆ ಮತ ಎಣಿಕೆ ಆರಂಭವಾಗಲಿದೆ. ಮತ ಎಣಿಕೆ ಸಿಬ್ಬಂದಿಗೆ ಸೂಕ್ತ ತರಬೇತಿಯನ್ನು ನೀಡಲಾಗಿದೆ ಎಂದು ಚುನಾವಣೆ ಆಯೋಗದ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಲೋಕಸಭಾ ಚುನಾವಣೆಯ ಮತ ಎಣಿಕೆ ಜೊತೆಗೆ ಆಂಧ್ರಪ್ರದೇಶ ಹಾಗೂ ಒಡಿಶಾದ ವಿಧಾನಸಭಾ ಉಪ ಚುನಾವಣೆಯ ಮತಎಣಿಕೆ ನಾಳೆ ನಡೆಯಲಿದೆ. ಫಲಿತಾಂಶವನ್ನು ಚುನಾವಣಾ ಆಯೋಗದ ಅಧಿಕೃತ ಜಾಲತಾಣ results.eci.gov.in ಅಥವಾ ವೋಟರ್ ಹೆಲ್ಪ್‌ಲೈನ್ ಆಪ್‌ನಲ್ಲಿ ಸಾರ್ವಜನಿಕರು ವೀಕ್ಷಿಸಬಹುದಾಗಿದೆ. ಏಳನೇ ಹಾಗೂ ಅಂತಿಮ ಹಂತದಲ್ಲಿ ಒಟ್ಟು ೫೭ ಲೋಕಸಭಾ ಕ್ಷೇತ್ರಗಳಲ್ಲಾದ ಶೇಕಡಾವಾರು ಮತದಾನ ಪ್ರಮಾಣದ ಪರಿಷ್ಕೃತ ಮಾಹಿತಿಯನ್ನು ಆಯೋಗ ಬಿಡುಗಡೆಗೊಳಿಸಿದ್ದು, ಈ ಹಂತದಲ್ಲಿ ಒಟ್ಟಾರೆ ಶೇಕಡ ೬೨.೫೦ ರಷ್ಟು ಮತದಾನವಾಗಿದೆ. ಬಿಹಾರದಲ್ಲಿ ಶೇಕಡ ೫೧.೭೯, ಚಂಡೀಗಢದಲ್ಲಿ ೬೭.೯೦,

ಹಿಮಾಚಲಪ್ರದೇಶದಲ್ಲಿ ೭೦.೦೫, ಜಾರ್ಖಂಡ್‌ನಲ್ಲಿ ೭೦.೬೫, ಒಡಿಶಾದಲ್ಲಿ ೭೦.೬೭, ಪಂಜಾಬ್‌ನಲ್ಲಿ ೬೨.೦೬, ಉತ್ತರ ಪ್ರದೇಶದಲ್ಲಿ ೫೫.೬೨ ಹಾಗೂ ಪಶ್ಚಿಮ ಬಂಗಾಳದಲ್ಲಿ ಶೇಕಡ ೭೩.೭೯ ರಷ್ಟು ಮತದಾನವಾಗಿರುವ ಕುರಿತು ವರದಿಯಾಗಿದೆ.

<><*<><>*><>

೨೦೨೪ರ ಲೋಕಸಭಾ ಚುನಾವಣೆಯ ಮತಎಣಿಕಾ ಕಾರ್ಯಕ್ಕೆ ಒಂದು ದಿನ ಬಾಕಿ ಉಳಿದಿದ್ದು, ಚುನಾವಣಾ ಆಯೋಗ ಇಂದು ಸುದ್ದಿಗೋಷ್ಠಿ ನಡೆಸಿತು. ಸುದ್ದಿಗೋಷ್ಠಿಯಲ್ಲಿ ಮುಖ್ಯ ಚುನಾವಣಾ ಆಯುಕ್ತ ರಾಜೀವ್‌ಕುಮಾರ್ ಹಾಗೂ ಚುನಾವಣಾ ಆಯುಕ್ತರಾದ ಜ್ಞಾನೇಶ್ ಕುಮಾರ್ ಮತ್ತು ಸುಖ್‌ಬೀರ್ ಸಿಂಗ್ ಸಂಧೂ ಪಾಲ್ಗೊಂಡಿದ್ದರು. ಈ ವೇಳೆ ಮಾತನಾಡಿದ ರಾಜೀವ್ ಕುಮಾರ್, ೨೦೨೪ರ ಸಾರ್ವತ್ರಿಕ ಚುನಾವಣೆಯ ಮತದಾನದಲ್ಲಿ ಸಾರ್ವಜನಿಕರು, ಮಹಿಳೆಯರು, ೮೫ ವರ್ಷ ಮೇಲ್ಪಟ್ಟವರು ಹಾಗೂ ವಿಶೇಷಚೇತನರು ದಾಖಲೆಯ ಸಂಖ್ಯೆಯಲ್ಲಿ ಪಾಲ್ಗೊಂಡು ಚುನಾವಣೆಯನ್ನು ಯಶಸ್ವಿಯಾಗಿಸಿದ್ದಾರೆ. ಈ ಚುನಾವಣೆಯ ಮೂಲಕ ಭಾರತ ೬೪೨ ಮಿಲಿಯನ್ ಹೆಮ್ಮೆ ಮತದಾರರು ಹೊಂದಿರುವ ದೇಶ ಎಂಬ ದಾಖಲೆ ನಿರ್ಮಿಸಿದೆ ಎಂದರು. ಮತದಾನ ಪೂರ್ಣಗೊಂಡ ಬಳಿಕ ಆಯೋಗ ಈ ರೀತಿಯ ಸುದ್ದಿಗೋಷ್ಠಿ ನಡೆಸುತ್ತಿರುವುದು ಚುನಾವಣಾ ಇತಿಹಾಸದಲ್ಲೇ ಮೊದಲ ಬಾರಿಯಾಗಿದೆ.

<><*<><>*><>

ಏಪ್ರಿಲ್ ೧೯ ರಂದು ನಡೆದಿದ್ದ ಅರುಣಾಚಲ ಪ್ರದೇಶ ಮತ್ತು ಸಿಕ್ಕಿಂನ ವಿಧಾನಸಭೆ ಚುನಾವಣೆಯ ಮತಗಳ ಎಣಿಕೆ ಕಾರ್ಯ ಪೂರ್ಣಗೊಂಡಿದೆ.  ಚುನಾವಣಾ ಆಯೋಗ ಫಲಿತಾಂಶ ಪ್ರಕಟಿಸಿದ್ದು, ಬಿಜೆಪಿ ೪೬ ಕ್ಷೇತ್ರಗಳಲ್ಲಿ ಜಯ ಸಾಧಿಸಿದೆ. ಅರುಣಾಚಲ ಪ್ರದೇಶದ ೬೦ ವಿಧಾನಸಭಾ ಕ್ಷೇತ್ರಗಳಲ್ಲಿ ಬಿಜೆಪಿ ೪೬ ಕ್ಷೇತ್ರಗಳಲ್ಲಿ ಗೆಲುವು ದಾಖಲಿಸಿ ಬಹುಮತ ಪಡೆದಿದೆ. ಎನ್‌ಪಿಇಪಿ ೫ ಕ್ಷೇತ್ರಗಳಲ್ಲಿ, ಇತರರು ೮ ಕ್ಷೇತ್ರಗಳಲ್ಲಿ ಗೆಲುವು ದಾಖಲಿಸಿದ್ದಾರೆ.  ಸಿಕ್ಕಿಂನಲ್ಲಿ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ - ಎಸ್‌ಕೆಎಂ ಪಕ್ಷ ಮತ್ತೊಮ್ಮೆ ಗದ್ದುಗೆ ಏರುವುದು ಖಚಿತವಾಗಿದೆ. ಸಿಕ್ಕಿಂನಲ್ಲಿ ಆಡಳಿತಾರೂಢ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾ - ಎಸ್‌ಕೆಎಂ ೩೨ ಕ್ಷೇತ್ರಗಳ ಪೈಕಿ ೩೦ ಕ್ಷೇತ್ರಗಳಲ್ಲಿ ಗೆಲುವು ಸಾಧಿಸಿದೆ. ಒಂದು ಕ್ಷೇತ್ರದಲ್ಲಿ ಸಿಕ್ಕಿಂ ಡೆಮಾಕ್ರೆಟಿಕ್ ಫ್ರೆಂಟ್, ಎಸ್‌ಡಿಎಫ್ ಗೆಲುವು ಸಾಧಿಸಿದೆ. ಸಿಕ್ಕಿಂನಲ್ಲಿ ಸತತ ೨ನೇ ಬಾರಿಗೆ ಜಯ ಸಾಧಿಸಿರುವ ಸಿಕ್ಕಿಂ ಕ್ರಾಂತಿಕಾರಿ ಮೋರ್ಚಾಗೆ ಹಾಗೂ ಮುಖ್ಯಮಂತ್ರಿ ಪ್ರೇಮ್ ಸಿಂಗ್ ತಮಾಂಗ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ.

<><*<><>*><>

ದೇಶಾದ್ಯಂತ ಎಲ್ಲ ಟೋಲ್ ಪ್ಲಾಜಾಗಳಲ್ಲಿ ವಾಹನ ಟೋಲ್ ಶುಲ್ಕವನ್ನು ಶೇಕಡ ೫ರಷ್ಟು ಹೆಚ್ಚಳ ಮಾಡಲಾಗಿದೆ ಎಂದು ಭಾರತೀಯ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ತಿಳಿಸಿದೆ. ಸಾಮಾನ್ಯವಾಗಿ ಪ್ರತಿವರ್ಷ ಏಪ್ರಿಲ್ ೧ ರಿಂದಲೇ ವಾರ್ಷಿಕ ಶುಲ್ಕ ಹೆಚ್ಚಳ ಮಾಡಲಾಗುತ್ತದೆ. ಆದರೆ ಈ ಬಾರಿ

ಲೋಕಸಭಾ ಚುನಾವಣೆಯ ಪ್ರಕ್ರಿಯೆ ಮುಗಿಯುವವರೆಗೆ ಟೋಲ್ ಶುಲ್ಕಗಳಲ್ಲಿ ಹೆಚ್ಚಳ ಮಾಡಬಾರದು ಎಂದು ಚುನಾವಣಾ ಆಯೋಗ ತಿಳಿಸಿತ್ತು. ಈ ಹಿನ್ನೆಲೆಯಲ್ಲಿ ಚುನಾವಣೆ ಮುಗಿದ ಬಳಿಕ ಇಂದಿನಿಂದ ಆದೇಶ ಜಾರಿಗೆ ತರಲಾಗಿದೆ. ದೇಶದಲ್ಲಿರುವ ವಿಸ್ತಾರವಾದ ರಾಷ್ಟ್ರೀಯ ಹೆದ್ದಾರಿ ಜಾಲ ೯೦೦ ಕ್ಕೂ ಹೆಚ್ಚು ಟೋಲ್ ಪ್ಲಾಜಾಗಳನ್ನು ಹೊಂದಿದೆ.

<><*<><>*><>

ಕರ್ನಾಟಕ ವಿಧಾನ ಪರಿಷತ್ತಿನ ೩ ಶಿಕ್ಷಕರ ಹಾಗೂ ೩ ಪದವೀಧರ ಕ್ಷೇತ್ರಗಳಿಗೆ ಇಂದು ಮತದಾನ ನಡೆಯುತ್ತಿದೆ. ಆರು ಕ್ಷೇತ್ರಗಳಲ್ಲಿ ಒಟ್ಟು ೭೮ ಅಭ್ಯರ್ಥಿಗಳು ಕಣದಲ್ಲಿದ್ದಾರೆ. ಒಟ್ಟು ಮೂರು ಲಕ್ಷದ ೬೩ ಸಾವಿರದ ೫೭೩ ಮಂದಿ ಮತದಾರರಿದ್ದಾರೆ. ಸುಗಮ ಮತದಾನಕ್ಕಾಗಿ ಶಿಕ್ಷಕರ ಕ್ಷೇತ್ರಗಳಲ್ಲಿ ೧೭೦ ಹಾಗೂ ಪದವೀಧರ ಕ್ಷೇತ್ರಗಳಲ್ಲಿ ೪೬೧ ಮತಗಟ್ಟೆಗಳನ್ನು ಚುನಾವಣಾ ಆಯೋಗ ಸ್ಥಾಪಿಸಿದೆ. ಈ ಚುನಾವಣೆಯ ಮತಎಣಿಕೆ ಇದೇ ೬ ರಂದು ನಡೆಯಲಿದೆ.

<><*<><>*><>

ಮೇ ತಿಂಗಳಲ್ಲಿ ಯುನೈಟೆಡ್ ಪೇಮೆಂಟ್ ಇಂಟರ್‌ಫೇಸ್-ಯುಪಿಐ, ೨೦.೪೫ ಟ್ರಿಲಿಯನ್ ರೂಪಾಯಿ ಮೌಲ್ಯದ ೧೪.೦೪ ಬಿಲಿಯನ್ ವಹಿವಾಟು ನಡೆಸಿ ಹೊಸ ದಾಖಲೆ ಸೃಷ್ಟಿಸಿದೆ ಎಂದು ಭಾರತೀಯ ರಾಷ್ಟ್ರೀಯ ಪಾವತಿ ನಿಗಮ -ಎನ್‌ಪಿಸಿಐ ತಿಳಿಸಿದೆ. ಇದು ಏಪ್ರಿಲ್ ತಿಂಗಳ ೧೩.೩೦ ಬಿಲಿಯನ್ ವಹಿವಾಟುಗಳಿಗೆ ಹೋಲಿಸಿದರೆ ಶೇಕಡ ೪ ರಷ್ಟು ಹೆಚ್ಚು ಹಾಗೂ ಅದೇ ಏಪ್ರಿಲ್ ತಿಂಗಳ ೧೯.೬೪ ಟ್ರಿಲಿಯನ್ ರೂಪಾಯಿ ಮೌಲ್ಯದ ವಹಿವಾಟಿಗೆ ಹೋಲಿಸಿದರೆ ೪ ಪ್ರತಿಶತದಷ್ಟು ಹೆಚ್ಚಳವಾಗಿದೆ. ೨೦೨೩ರ ಮೇ ತಿಂಗಳಿಗೆ ಹೋಲಿಸಿದರೆ ವಹಿವಾಟಿನಲ್ಲಿ ಶೇಕಡ ೪೯ರಷ್ಟು ಹಾಗೂ ಮೌಲ್ಯದಲ್ಲಿ ಶೇಕಡ ೩೯ ರಷ್ಟು ಹೆಚ್ಚಳವಾಗಿದೆ.

<><*<><>*><>

ಚುನಾವಣೋತ್ತರ ಸಮೀಕ್ಷೆಗಳಲ್ಲಿ ಬಿಜೆಪಿ ನೇತೃತ್ವದ ಎನ್‌ಡಿಎ ಮೈತ್ರಿಕೂಟ ಮೂರನೇ ಬಾರಿ ಅಧಿಕಾರ ಉಳಿಸಿಕೊಳ್ಳಲಿದೆ ಎಂದು ವರದಿಯಾಗಿರುವ ಹಿನ್ನೆಲೆಯಲ್ಲಿ ಭಾರತೀಯ ಷೇರು ಸಂವೇದಿ ಸೂಚ್ಯಂಕಗಳು ಆರಂಭಿಕ ವಹಿವಾಟಿನಲ್ಲಿಂದು ದಾಖಲೆಯ ಅಂಕಗಳ ಏರಿಕೆ ಕಂಡಿವೆ. ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಆರಂಭಿಕ ವಹಿವಾಟಿನಲ್ಲಿ ಷೇರು ಸಂವೇದಿ ಸೂಚ್ಯಂಕ ಸೆನ್ಸೆಕ್ಸ್ ೨ ಸಾವಿರದ ೭೭೮ ಅಂಕಗಳ ಏರಿಕೆಯೊಂದಿಗೆ ೭೬ ಸಾವಿರದ ೭೩೯ ರಲ್ಲಿ ವಹಿವಾಟು ನಡೆಸಿದೆ. ಅಂತೆಯೇ ರಾಷ್ಟ್ರೀಯ ಸಂವೇದಿ ಸೂಚ್ಯಂಕ - ನಿಫ್ಟಿ ಸಾರ್ವಕಾಲಿಕ ದಾಖಲೆಯ ೮೦೮ ಅಂಕಗಳ ಏರಿಕೆಯೊಂದಿಗೆ ೨೩ ಸಾವಿರದ ೩೩೯ ರಲ್ಲಿ ವಹಿವಾಟು ನಡೆಸಿತ್ತು.

<><*<><>*><>

ಆಕಾಶವಾಣಿ ದ್ವಿಭಾಷಾ ನೇರ ಫೋನ್‌ಇನ್ ಕಾರ್ಯಕ್ರಮ ಪಬ್ಲಿಕ್ ಸ್ಪೀಕ್ ಅಡಿ ಬಿಸಿಗಾಳಿ ಪರಿಸ್ಥಿತಿಯ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಸುರಕ್ಷಾ ಕ್ರಮಗಳ ಕುರಿತ ಚರ್ಚೆ ಇಂದು ರಾತ್ರಿ ೯.೩೦ಕ್ಕೆ ಪ್ರಸಾರವಾಗಲಿದೆ.ರಾಷ್ಟ್ರೀಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸದಸ್ಯ ಡಾ. ಕೃಷ್ಣ ಎಸ್. ವತ್ಸಾ ಹಾಗೂ ಏಮ್ಸ್‌ನ ಔಷಧಿ ವಿಭಾಗದ ಡಾ. ಪಿಯೂಶ್ ರಂಜನ್ ಚರ್ಚೆಯಲ್ಲಿ ಪಾಲ್ಗೊಳ್ಳಲಿದ್ದಾರೆ. ಬಿಸಿಗಾಳಿ ಪರಿಸ್ಥಿತಿಯ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಅಗತ್ಯ ಕ್ರಮಗಳ ಕುರಿತಾಗಿ ಶ್ರೋತೃಗಳಿಗೆ ಪ್ರಶ್ನೆ ಕೇಳಿ ಉತ್ತರ ಪಡೆಯುವ ಅವಕಾಶವಿರುತ್ತದೆ. ಇದಕ್ಕಾಗಿ ಇಂದು ರಾತ್ರಿ ೯.೩೦ರ ನಂತರ ೦೧೧-೨೩೪೨೧೦೫೦ ಮತ್ತು ೦೧೧-೨೩೩೧೪೪೪೪ ದೂರವಾಣಿ ಸಂಖ್ಯೆಗಳಿಗೆ ಕರೆ ಮಾಡಿ ಅಥವಾ ವಾಟ್ಸ್‌ಪ್ ಸಂಖ್ಯೆ ೯೨೮೯೦೯೪೦೪೪ ಗೆ ಸಂಪರ್ಕಿಸಿ ಪ್ರಶ್ನೆಗಳನ್ನು ಕೇಳಬಹುದು. ಈ ನೇರ ಪ್ರಸಾರ ಆಕಾಶವಾಣಿ ಗೋಲ್ಡ್ ಚಾನೆಲ್ ಮತ್ತು ಹೆಚ್ಚುವರಿ ತರಂಗಾಂತರಗಳಲ್ಲಿ ಲಭ್ಯವಿರುತ್ತದೆ. ಇದಲ್ಲದೇ ನ್ಯೂಸ್ ಆನ್ ಏರ್ ಡಾಟ್ ಜಿಓವಿ ಡಾಟ್ ಇನ್ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಅಫಿಶಿಯಲ್ ಯುಟ್ಯೂಬ್ ಚಾನೆಲ್‌ನಲ್ಲಿಯೂ ಕಾರ್ಯಕ್ರಮ ಲಭ್ಯವಿರುತ್ತದೆ.

<><*<><>*><>

ಮಧ್ಯಪ್ರದೇಶದ ರಾಜಗಢ ಜಿಲ್ಲೆಯಲ್ಲಿ ನಿನ್ನೆ ರಾತ್ರಿ ಸಂಭವಿಸಿದ ಟ್ರ್ಯಾಕ್ಟರ್ ಟ್ರೋಲಿ ರಸ್ತೆ ಅಪಘಾತದಲ್ಲಿ ಮೃತಪಟ್ಟವರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಸಂತಾಪ ವ್ಯಕ್ತಪಡಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ರಾಷ್ಟ್ರಪತಿಗಳು, ಅಪಘಾತದ ಕುರಿತು ತಿಳಿದು ಅತೀವ ದುಃಖವಾಗಿದ್ದು, ಗಾಯಗೊಂಡವರು ಶೀಘ್ರವಾಗಿ ಗುಣಮುಖರಾಗಲಿ ಎಂದು ಪ್ರಾರ್ಥಿಸಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೨.೩೦ ಕ್ಕೆ <>*><>